



ಅರುಣ ಪಿ. ಭಟ್ಟ

## ವಾರಭವಿಷ್ಯ 02.07.2020ರಿಂದ 08.07.2020ರವರೆಗೆ




ಮನೆಗೆ ನೆಂಟರಿಷ್ಟರ ಆಗಮನದಿಂದ ಸಂತಸ. ಆದಾಯವು ಹೆಚ್ಚಾಗುವ ಸಾಧ್ಯತೆ ಇದೆ. ನಿರೀಕ್ಷಿತ ಕಾರ್ಯಗಳು ಸರಾಗವಾಗಿ ನಡೆಯಲಿದೆ. ಬರಬೇಕಾದ ಬಾಕಿ ಹಣ ಬರುವ ಸಾಧ್ಯತೆಗಳಿವೆ. ವಾರಾಂತ್ಯದಲ್ಲಿ ಆರೋಗ್ಯ ಏರುಪೇರಾಗುವ ಸಾಧ್ಯತೆ. ವ್ಯಾಪಾರಸ್ಥರಿಗೆ ಉತ್ತಮ ಆದಾಯ. ಕುಟುಂಬದೊಂದಿಗೆ ಸಂತೋಷದಿಂದ ಕಾಲ ಕಳೆಯುತ್ತೀರಿ. ಶುಭದಿನ 2. ಲಕ್ಷ್ಮೀ ನರಸಿಂಹ ಸ್ತೋತ್ರ ಜಪಿಸಿರಿ.




ನಿಮ್ಮ ಕೆಲಸ ಕಾರ್ಯಗಳು ದೈವ ಪ್ರೇರಣೆಯಿಂದ ಸುಲಭವಾಗಿ ನಡೆಯುತ್ತವೆ. ಕೆಲವು ಸಮಸ್ಯೆಗಳಿಗೆ ಪರಿಹಾರ ಹುಡುಕುವುದು ಒಳಿತು. ತೀರಾ ಸಂಕಷ್ಟವನ್ನು ಮನದಲ್ಲಿ ಇಟ್ಟುಕೊಂಡು ಮಾನಸಿಕವಾಗಿ ಬಳಲುವ ಸಾಧ್ಯತೆ ಇದೆ. ಸಹವರ್ತಿಗಳಿಂದ ಉದ್ಯೋಗದಲ್ಲಿ ಅಪವಾದಗಳಿಗೆ ಗುರಿಯಾಗುವ ಸಾಧ್ಯತೆ ಕಾಣಬಹುದು. ಪ್ರತಿ ಹೆಜ್ಜೆಯನ್ನೂ ವಿಚಾರಮಾಡಿ ಇಡಿ. ಶುಭದಿನ 4. ಹನುಮಾನ್ ಚಾಲೀಸ್ ಓದಿರಿ.




ಯಶಸ್ವಿಯಾಗಿ ಕಾರ್ಯಗಳನ್ನು ಮಾಡಿಕೊಳ್ಳುವಿರಿ. ಮನಸ್ಸಿನಲ್ಲಿ ಉದ್ಭವವಾಗುವ ಆಸೆ ಆಮಿಷಗಳನ್ನು ನಿಯಂತ್ರಣದಲ್ಲಿಡುವುದು ಸೂಕ್ತ. ಆರ್ಥಿಕ ಸ್ಥಿತಿ ಉತ್ತಮವಾಗಿದೆ. ಸಂಗಾತಿ ನಿಮ್ಮ ಯೋಜನೆಗೆ ಸಂಬಂಧಪಟ್ಟ ವಿಷಯಗಳಲ್ಲಿ ಉತ್ತಮ ರೀತಿಯ ವಿಷಯಗಳನ್ನು ತಿಳಿಸಿಕೊಡುವ ಸಾಧ್ಯತೆಯಿದೆ. ಕುಟುಂಬದವರೊಡನೆ ಯಾತ್ರಾಸ್ಥಳ ಪ್ರವಾಸ ಸಾಧ್ಯತೆಯಿದೆ. ಶುಭದಿನ 3. ವಿಷ್ಣು ಸಹಸ್ರನಾಮ ಪಠಿಸಿರಿ.




ಕೆಲಸದಲ್ಲಿ ಪ್ರಭುದ್ಧತೆ ಮೆರೆಯಿರಿ. ಸಂಯಮದಿಂದ ಜೀವನ ಕಟ್ಟಿಕೊಳ್ಳುವ ಪ್ರಯತ್ನ ಸಾಗಲಿ. ನಿಮ್ಮಲ್ಲಿರುವ ವಿಶೇಷ ಪ್ರತಿಭೆಗೆ ಸೂಕ್ತ ವೇದಿಕೆ ದೊರೆಯುವುದು. ಪ್ರಮುಖ ಕಾರ್ಯಗಳನ್ನು ಮಾಡಿ ಮುಗಿಸುವಿರಿ. ವಾಹನ ಕ್ರಯ ವಿಕ್ರಯ ಯೋಗವಿದೆ. ಆಸ್ತಿ ಖರೀದಿ ಆಭರಣ ಖರೀದಿಗೆ ಸಕಾಲ. ಆರೋಗ್ಯ ಉತ್ತಮವಾಗಿರುತ್ತದೆ ಕುಟುಂಬದಲ್ಲಿ ಸಂತಸ ಇರುವುದು. ಶುಭದಿನ 4. ಶ್ರೀ ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ಕಾಲ ಬರಲಿ ಎಂದು ಸುಮ್ಮನೆ ಕೂರಬೇಡಿ. ಕೆಲಸದ ಬಗ್ಗೆ ಆದಷ್ಟು ಶ್ರಮ ಪಡುವುದು ಒಳ್ಳೆಯದು. ನಿರೀಕ್ಷಿತ ಆದಾಯ ಕೈ ಸೇರುವ ಸಾಧ್ಯತೆ ಇದೆ. ಕುಟುಂಬದ ಕೆಲ ವಿಚಾರಗಳಿಂದ ತೊಂದರೆ ಅನುಭವಿಸುವಿರಿ. ಯೋಜನೆಗಳಲ್ಲಿ ಇತರರ ಹಸ್ತಕ್ಷೇಪದಿಂದ ಹಿನ್ನಡೆಯಾಗಬಹುದು. ದೈಹಿಕ ಮತ್ತು ಮಾನಸಿಕ ಸ್ಥಿರತೆಯನ್ನು ಕಾಪಾಡಿಕೊಳ್ಳಿ. ವ್ಯಾಪಾರಸ್ಥರಿಗೆ ಉತ್ತಮ ಲಾಭ. ಶುಭದಿನ 2. ಸೌಂದರ್ಯ ಲಹರಿ ಪಠಿಸಿರಿ.




ನಿಮ್ಮ ತಪ್ಪುಗಳನ್ನು ತಿದ್ದಿಕೊಳ್ಳುವುದು ಮುಖ್ಯ. ಸಹೋದರರೊಡನೆ ವೈಚಾರಿಕ ಭಿನ್ನಮತ ಉಂಟಾಗಬಹುದು. ಸೇವಾ ವಲಯದಲ್ಲಿ ಕಾರ್ಯ ನಿರ್ವಹಿಸುವವರು ಬಡ್ತಿ ನಿರೀಕ್ಷೆ ಮಾಡಬಹುದು. ಸ್ಪರ್ಧಾತ್ಮಕ ಕ್ಷೇತ್ರದಲ್ಲಿ ಇರುವವರು ವಾರದ ಮಧ್ಯ ಭಾಗದಲ್ಲಿ ಶುಭ ಸುದ್ದಿಯನ್ನು ಕೇಳಲಿದ್ದೀರಿ. ಶಿಕ್ಷಣ, ಕಲೆ, ಸಾಹಿತ್ಯ ಕ್ಷೇತ್ರದವರಿಗೆ ಯಶಸ್ಸು ದೊರೆಯಲಿದೆ. ಶುಭದಿನ 5. ಲಿಂಗಾಷ್ಟಕ ಪಠಿಸಿರಿ.




ಸಂತೋಷದ ಕೆಲಸಗಳನ್ನು ಮಾಡಲು ಮುಂದಾಗಿ. ಆರೋಗ್ಯದ ವಿಷಯದಲ್ಲಿ ಜಾಗ್ರತೆ ವಹಿಸುವುದು ಸೂಕ್ತ. ಕುಟುಂಬದಲ್ಲಿ ಉದ್ಭವವಾಗುವ ಸಮಸ್ಯೆಗಳನ್ನು ಆದಷ್ಟು ಪರಿಹರಿಸಲು ಮುಂದಾಗಿ. ಸುಖಾಸುಮ್ಮನೆ ಕೋಪಾವೇಷ ವ್ಯಕ್ತಪಡಿಸುವುದು ಒಳಿತಲ್ಲ. ಉದ್ಯೋಗ ಸ್ಥಳದಲ್ಲಿ ಸ್ವಲ್ಪ ಮಟ್ಟಿಗೆ ಒತ್ತಡ ಕಾಣಿಸಿಕೊಳ್ಳಬಹುದು. ಆರೋಗ್ಯದಲ್ಲೂ ಏರುಪೇರಾಗುತ್ತದೆ. ಶುಭದಿನ 4. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಅಪರೂಪದ ವ್ಯಕ್ತಿಗಳನ್ನು ಭೇಟಿಯಾಗುತ್ತೀರಿ. ಲವಲವಿಕೆ ಕೆಲಸಗಳಲ್ಲಿ ಪಾಲ್ಗೊಳ್ಳುವಿರಿ. ಆರೋಗ್ಯದ ಬಗ್ಗೆ ಹೆಚ್ಚಿನ ಗಮನಹರಿಸುವುದು ಸೂಕ್ತ. ಮಕ್ಕಳ ಉದ್ಯೋಗದ ಬಗ್ಗೆ ಚಿಂತೆ ಆವರಿಸಬಹುದು. ಹಳೆಯ ನೆನಪುಗಳು ಕಾಡಲಿವೆ. ಆಧ್ಯಾತ್ಮದ ವಿಚಾರ ಬಗ್ಗೆ ಗಮನಹರಿಸುವಿರಿ. ವಿವಿಧ ಆದಾಯ ಮೂಲಗಳಿಂದ ಅನುಕೂಲ ಒದಗಿ ಬರಲಿದೆ. ಶುಭದಿನ 3. ಶಿವಕವಚ ಪಠಣ ಮಾಡಿರಿ.




ಆಸ್ತಿ ಮಾರಾಟದ ವಿಷಯದಲ್ಲಿ ಶುಭ ಫಲಿತಾಂಶ ಕಾಣಬಹುದು. ಮಕ್ಕಳ ಪ್ರಗತಿಗಾಗಿ ಹೆಚ್ಚಿನ ಹಣ ಖರ್ಚಾಗುವ ಸಾಧ್ಯತೆ. ಸಾಮಾಜಿಕ ಕ್ಷೇತ್ರದಲ್ಲಿ ಹಿನ್ನಡೆ ಕಂಡುಬರುತ್ತದೆ. ಇಂಟರ್ ವ್ಯೂಗಳಲ್ಲಿ ಯಶ ಸಾಧಿಸುತ್ತೀರಿ. ತುಂಬ ಮುಖ್ಯವಾದ ಚರ್ಚೆ ಕೂಡ ನಡೆಸುವ ಸಾಧ್ಯತೆ ಇದೆ. ಈ ಅವಧಿಯಲ್ಲಿ ಹೆಚ್ಚು ಸಂತೋಷದಿಂದ ಕಾಣಿಸಿಕೊಳ್ಳುತ್ತೀರಿ. ಶುಭದಿನ 8. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಓದಿನ ಕಡೆಗೆ ಉತ್ಸಾಹ ಹೆಚ್ಚಾಗುತ್ತದೆ. ಕೆಲವರ ಬಗ್ಗೆ ಈ ವಾರ ನಿಮಗೆ ಅನುಮಾನ ಮೂಡುವ ಸಾಧ್ಯತೆ ಇದೆ. ಕೆಲಸದ ವಿಷಯದಲ್ಲಿ ಹೆಚ್ಚು ಜವಾಬ್ದಾರಿ ಸಿಗುವುದು. ಕನಸುಗಳನ್ನು ನನಸು ಮಾಡಿಕೊಳ್ಳುವ ಪ್ರಯತ್ನ ನಿಮ್ಮಿಂದ ಬೇಕಾಗಿದೆ. ಅನಿರೀಕ್ಷಿತವಾಗಿ ಪ್ರಯಾಣ ಮಾಡುವ ಸಾಧ್ಯತೆ ಕಾಣಬಹುದು. ಮಕ್ಕಳ ವಿಷಯದಲ್ಲಿ ನಿಮ್ಮಲ್ಲಿ ಹೆಮ್ಮೆ ಮೂಡುವುದು ನಿಶ್ಚಿತ. ಶುಭದಿನ 2. ನವದುರ್ಗಾ ಆರಾಧನೆ ಮಾಡಿರಿ.




ವಾರದ ಶುರುವಿನಿಂದಲೇ ನಿಮ್ಮ ಆರೋಗ್ಯ ಉತ್ತಮವಾಗಿರುತ್ತದೆ. ಸದ್ಯಕ್ಕೆ ನೀವು ಎದುರಿಸುತ್ತಿರುವ ಬಿಕ್ಕಟ್ಟುಗಳು ನಿವಾರಣೆ ಆಗುತ್ತವೆ. ನಿಮ್ಮ ಸಾಮರ್ಥ್ಯ ಹಾಗೂ ಒಟ್ಟಾರೆ ಆಲೋಚನೆಯಲ್ಲಿ ಸಕಾರಾತ್ಮಕವಾದ ಪ್ರಗತಿ ಕಾಣಿಸಿಕೊಳ್ಳುತ್ತದೆ. ದೈಹಿಕ ಸದೃಢತೆ ಬಗ್ಗೆ ಹೆಚ್ಚಿನ ಗಮನ ನೀಡುತ್ತೀರಿ. ಇದರಿಂದ ನಿಮ್ಮ ಶಕ್ತಿ ಚೈತನ್ಯ ಹೆಚ್ಚಾಗುತ್ತದೆ. ಶುಭದಿನ 4. ಶನಿಸ್ತೋತ್ರ ಪಠಿಸಿರಿ.




ಸಂಬಂಧಿಕರಿಂದ ಶುಭ ಸುದ್ದಿಯನ್ನು ಕೇಳುತ್ತೀರಿ. ಈವರೆಗಿನ ಬಿಕ್ಕಟ್ಟು ಸಮಸ್ಯೆಗಳು ಶಮನವಾಗುತ್ತವೆ. ನಿಮ್ಮ ಸಾಮರ್ಥ್ಯ, ಚೈತನ್ಯ ವೃದ್ಧಿಯಾಗುತ್ತದೆ. ಇದರ ಜತೆಗೆ ಧೈರ್ಯ ಹೆಚ್ಚಲಿದೆ. ನಿಮ್ಮ ವಿರೋಧಿಗಳನ್ನು ಈ ಅವಧಿಯಲ್ಲಿ ಮಣಿಸುತ್ತೀರಿ. ಹಣಕಾಸು ಹೂಡಿಕೆ ಲಾಭದಾಯಕವಾಗಿ ಇರುತ್ತದೆ. ನಿಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಗಮನ ನೀಡಬೇಕಾಗುತ್ತದೆ. ಶುಭದಿನ 5. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.